ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1851 (2141)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ರಾಜ್ಯದಲ್ಲಿ ಮಕ್ಕಳ ನಾಪತ್ತೆ ಪ್ರಕರಣ ಕುರಿತು

(ಅ) ರಾಜ್ಯದಲ್ಲಿ ಮಕ್ಕಳ ನಾಪತ್ತೆ ಪ್ರಕರಣಗಳು ಹೆಚ್ಚುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಪ್ರಕರಣಗಳು ದಾಖಲಾಗಿವೆ; ಆ ಪೈಕಿ ಪತ್ತೆಯಾದ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹಸಿವು ಮುಕ್ತ ರಾಜ್ಯವನ್ನಾಗಿಸಲು ರಾಜ್ಯ ಸರ್ಕಾರ ಎಷ್ಟು ಪ್ರಯತ್ನ ಮಾಡಿದರೂ ಮೂರು ಹೊತ್ತಿನ ಊಟಕ್ಕೆ ಮನೆಯಲ್ಲಿ ಸಮಸ್ಯೆ ಇರುವ ಕುಟುಂಬಗಳ ಮಕ್ಕಳೇ ನಾಪತ್ತೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಬೀದರ ಜಿಲ್ಲೆಯ ವ್ಯಾಪ್ತಿಯಲ್ಲಿ ಇಂತಹ ಎಷ್ಟು ಪ್ರಕರಣಗಳು ದಾಖಲಾಗಿದೆ ? (ಸಂಪೂರ್ಣ ವಿವರ ಒದಗಿಸುವುದು)